| | |
|---|---|
| | **ಕರ್ನಾಟಕ ಲೋಕಸೇವಾ ಆಯೋಗ** |

PSC 1 RTB-1/2023 ದಿನಾಂಕ 14-05-2024

## ತಿದ್ದುಪಡಿ ಅಧಿಸೂಚನೆ

ಆಯೋಗದ ಅಧಿಸೂಚನೆ ಸಂಖ್ಯೆ ಪಿಎಸ್‌ಸಿ 1 ಆರ್‌ಟಿಬಿ-1/2023 ದಿನಾಂಕ 13-03-2024ರಲ್ಲಿ ವಿವಿಧ ಇಲಾಖೆಗಳಲ್ಲಿನ ವಿವಿಧ ಗ್ರೂಪ್-'ಬಿ' ವೃಂದದ 277 (RPC) ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಸದರಿ ಅಧಿಸೂಚನೆಯಲ್ಲಿನ ಜಲ ಸಂಪನ್ಮೂಲ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ1) - 90 ಮತ್ತು ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) (ವಿಭಾಗ-1) 10 ಹುದ್ದೆಗಳಿಗೆ ಇಲಾಖೆಯ ಪ್ರಸ್ತಾವನೆಯಂತೆ ನಿಗದಿಪಡಿಸಲಾಗಿದ್ದ ವಿದ್ಯಾರ್ಹತೆಯ ಕೋರ್ಸ್ ಗಳಲ್ಲಿ ಕೇವಲ B.E ಪದವಿಗಳನ್ನು ಮಾತ್ರ ಪರಿಗಣಿಸಿ, ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಪ್ರಸ್ತುತ ಸರ್ಕಾರದ ಪತ್ರ ದಿನಾಂಕ 13.05.2024ರಲ್ಲಿ ಸದರಿ ಹುದ್ದೆಗಳಿಗೆ B.Tech ಪದವಿಯನ್ನು ಸಹ ಪರಿಗಣಿಸಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವಂತೆ ಕೋರಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಮೇಲ್ಕಂಡ ಅಧಿಸೂಚನೆಯಲ್ಲಿನ ಜಲ ಸಂಪನ್ಮೂಲ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ 1) - 90 ಮತ್ತು ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) (ವಿಭಾಗ-1) 10 ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ B.Tech ಪದವಿಗಳನ್ನು ಪರಿಗಣಿಸಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಹಾಗೂ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಸಾಕಷ್ಟು ಕಾಲಾವಕಾಶ ನೀಡುವ ದೃಷ್ಟಿಯಿಂದ ಮೇಲ್ಕಂಡ ಅಧಿಸೂಚನೆಯಲ್ಲಿನ ವಿವಿಧ ಇಲಾಖೆಗಳ ಎಲ್ಲಾ ಗ್ರೂಪ್ "ಬಿ" ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವನ್ನು 24-05-2024ರವರೆಗೆ ವಿಸ್ತರಿಸಲಾಗಿದೆ. ಉಳಿದಂತೆ ದಿನಾಂಕ 13.03.2024ರ ಅಧಿಸೂಚನೆಯಲ್ಲಿನ ಇತರೆ ಷರತ್ತು / ಸೂಚನೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಸಹಿ/-
( ಜ್ಞಾನೇಂದ್ರ ಕುಮಾರ್ ಗಂಗ್ವಾರ್)
ಕಾರ್ಯದರ್ಶಿ (ಪ್ರ),
ಕರ್ನಾಟಕ ಲೋಕಸೇವಾ ಆಯೋಗ

## ಕರ್ನಾಟಕ ಲೋಕಸೇವಾ ಆಯೋಗ, " ಉದ್ಯೋಗ ಸೌಧ ",ಬೆಂಗಳೂರು -560001

ಸಂಖ್ಯೆ: ಪಿಎಸ್ ಸಿ 1 ಆರ್ ಟಿಬಿ- 1/2023 ದಿನಾಂಕ: 13-03-2024

### ಅಧಿಸೂಚನೆ

1) ಆಯೋಗವು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ರನ್ವಯ ಉಳಿಕೆ ಮೂಲ ವೃಂದದಲ್ಲಿನ ಕೆಳಕಂಡ ಗ್ರೂಪ್-'ಬಿ' ವೃಂದದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ Online ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರಮ ಸಂಖ್ಯೆ | ಇಲಾಖೆಯ ಹೆಸರು | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ |
|---|---|---|---|
| ಗ್ರೂಪ್ –' ಬಿ ' ಹುದ್ದೆಗಳು (ಉಳಿಕೆ ಮೂಲವೃಂದ) | | | |
| 1 | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ-1) | 92 |
| 2 | ಜಲ ಸಂಪನ್ಮೂಲ ಇಲಾಖೆ | ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ-1) | 90 |
| 3 | ಭೂಮಾಪನ, ಕಂದಾಯ **ವ್ಯವಸ್ಥೆ, ಮತ್ತು ಭೂ ದಾಖಲೆಗಳ ಇಲಾಖೆ** | **ಭೂ ದಾಖಲೆಗಳ** ಸಹಾಯಕ ನಿರ್ದೇಶಕರು | 24 |
| 4 | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಪತ್ರಾಂಕಿತ ವ್ಯವಸ್ಥಾಪಕರು/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು | 21 |
| 5 | ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ | ಸಹಾಯಕ ನಿರ್ದೇಶಕರು | 20 |
| 6 | ಜಲ ಸಂಪನ್ಮೂಲ ಇಲಾಖೆ | ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) (ವಿಭಾಗ-1) | 10 |
| 7 | ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ | ಕಾರ್ಖಾನೆಗಳ ಸಹಾಯಕ ನಿರ್ದೇಶಕರು | 07 |
| 8 | ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ | ಬಾಯ್ಲರುಗಳ ಸಹಾಯಕ ನಿರ್ದೇಶಕರು | 03 |
| 9 | ಅಂತರ್ಜಲ ನಿರ್ದೇಶನಾಲಯ | ಭೂ ವಿಜ್ಞಾನಿ | 10 |
| | | ಒಟ್ಟು | 277 |

2) ಆಯ್ಕೆಪ್ರಕ್ರಿಯೆಗೆ ನಿಗದಿಪಡಿಸಿರುವ ಕಾಲಮಿತಿ :

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 15-04-2024 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 14-05-2024 |
| ಶುಲ್ಕ ಪಾವತಿಗೆ ಕೊನೆಯ ದಿನಾಂಕ | 14-05-2024 |
| ಸ್ಪರ್ಧಾತ್ಮಕ ಪರೀಕ್ಷಾ ದಿನಾಂಕ (ತಾತ್ಕಾಲಿಕ) | 11-08-2024 (ಕನ್ನಡ ಭಾಷಾ ಪರೀಕ್ಷೆ ಮತ್ತು ಸಾಮಾನ್ಯ ಪತ್ರಿಕೆ ಮಾತ್ರ) |

**ವಿಶೇಷ ಸೂಚನೆ:-**

(1) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆ ನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.

(2) ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.

(3) ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರ/ಇತರೆ ಪ್ರಮಾಣ ಪತ್ರಗಳನ್ನು ತಮ್ಮ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. (ದಾಖಲೆಗಳು ಸ್ಪಷ್ಟವಾಗಿರುಬೇಕು) ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.

(4) ಅರ್ಜಿ ಸಲ್ಲಿಸುವ ಸಮಯದಲ್ಲಿ ಮೀಸಲಾತಿಯನ್ನು ಕೋರದೆ ತದನಂತರದಲ್ಲಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರಿ ಸಲ್ಲಿಸುವ ಮನವಿ/ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

2.1 ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್/UPI ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ/ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## 3) ಅರ್ಜಿ ಸಲ್ಲಿಸುವ ಹಂತಗಳು/ ಅರ್ಜಿ ಸಲ್ಲಿಸುವ ಪ್ರಕ್ರಿಯೆ

ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ. ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು, (OTR- ONE TIME REGISTRATION) ಅಭ್ಯರ್ಥಿಗಳು ನೀಡಿರುವ ಮಾಹಿತಿಯನ್ನು ಮುಂದಿನ ಎಲ್ಲಾ ಅಧಿಸೂಚನೆಗಳಿಗೂ ಪರಿಗಣಿಸಲಾಗುವುದರಿಂದ, ಅಭ್ಯರ್ಥಿಗಳು Profile Creation / ರುಜುವಾತುಗಳು ಸೃಷ್ಟಿಸುವ ಹಂತದಲ್ಲಿ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತಹಂತವಾಗಿ ಓದಿಕೊಳ್ಳತಕ್ಕದ್ದು, ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿಮಾಡತಕ್ಕದ್ದು.

**ಸೂಚನೆ:**

i. "ವೈಯಕ್ತಿಕ ವಿವರದಲ್ಲಿ" SSLC ಯನ್ನು 2002 ಅಥವಾ ಅದಕ್ಕಿಂತ ಹಿಂದೆ ಅಧ್ಯಯನ ಮಾಡಿದ ಅಭ್ಯರ್ಥಿಗಳು ವಿವರಗಳನ್ನು ಸ್ವತ: [Manual Entry] ನಮೂದು ಮಾಡಬೇಕಾಗಿರುತ್ತದೆ. 2003 ಮತ್ತು ನಂತರದಲ್ಲಿಅಧ್ಯಯನ ಮಾಡಿದ ಅಭ್ಯರ್ಥಿಗಳು SSLC ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂ ಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.

ii. "ವೈಯಕ್ತಿಕ ವಿವರದಲ್ಲಿ" CBSE ಯನ್ನು 2003 ಅಥವಾ ಅದಕ್ಕಿಂತ ಹಿಂದೆ ಅಧ್ಯಯನ ಮಾಡಿದ ಅಭ್ಯರ್ಥಿಗಳು ವಿವರಗಳನ್ನು ಸ್ವತ: [Manual Entry] ನಮೂದು ಮಾಡಬೇಕಾಗಿರುತ್ತದೆ. 2004 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು CBSE ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.

iii. "ವಿದ್ಯಾರ್ಹತೆಯ ವಿವರದಲ್ಲಿ" PUC ತರಗತಿಯನ್ನು 2007 ಅಥವಾ ಅದಕ್ಕಿಂತ ಹಿಂದೆ ಅಭ್ಯಸಿಸಿದ್ದಲ್ಲಿ ಅಥವಾ ಯಾವುದೇ ಡಾಟಾ ಬಾರದೇ ಇದ್ದಲ್ಲಿ ಸ್ವತಃ ವಿವರಗಳನ್ನು ನಮೂದಿಸುವುದು.

iv. PUC ತರಗತಿಯನ್ನು 2008 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು PUC ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂ ಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.

v. “ಗುರುತಿನ ಪುರಾವೆ /ವಿವರದಲ್ಲಿ” Aadhaar / Kutumba ID /Ration Card/UDID card ನ ಸಂಖ್ಯೆಗಳನ್ನು ನಮೂದಿಸಿದಲ್ಲಿ ನಿಮ್ಮ ಖಾಯಂ ವಿಳಾಸದ ಮಾಹಿತಿಯನ್ನು ಸ್ವಯಂಚಾಲಿತವಾಗಿ ಪಡೆಯಲಾಗುವುದು.

“ಮೀಸಲಾತಿ ವಿವರದಲ್ಲಿ ”ನೀವು ಮೀಸಲಾತಿಯನ್ನು ಪಡೆಯಲು ಇಚ್ಛಿಸಿದಲ್ಲಿ ನಿಮ್ಮ ಜಾತಿ ಮೀಸಲಾತಿ / HK ಮೀಸಲಾತಿ ಪ್ರಮಾಣ ಪತ್ರದ RD ಸಂಖ್ಯೆಯನ್ನು ನಮೂದಿಸಿದಲ್ಲಿ API ಮೂಲಕ ವಿವರಗಳನ್ನು ಸ್ವಯಂಚಾಲಿತವಾಗಿ ಪಡೆಯಲಾಗುವುದು ಅಥವಾ ಸ್ವತಃ ಅಭ್ಯರ್ಥಿಗಳು [Manual Entry ] ವಿವರಗಳನ್ನು ದಾಖಲಿಸಲು ಅವಕಾಶ ನೀಡಲಾಗಿರುತ್ತದೆ.

i. ಅಭ್ಯರ್ಥಿಗಳು KPSC ವೆಬ್‌ಸೈಟ್ ಮೂಲಕ ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು, ಇದರ ಹೊರತಾಗಿ ಯಾವುದೇ ಇತರ ಮೂಲಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ii. ಹೊಸದಾಗಿ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಲು,ಅರ್ಜಿದಾರರು https://kpsconline.karnataka.gov.in ಗೆ ಭೇಟಿ ನೀಡಬೇಕು ಮತ್ತು ತಮ್ಮನ್ನು ನೋಂದಾಯಿಸಿಕೊಳ್ಳಲು "ಹೊಸ ಅರ್ಜಿದಾರರ ನೋಂದಣಿ" (NEW REGISTRATION) ಲಿಂಕ್ ಅನ್ನು ಕ್ಲಿಕ್ ಮಾಡಬೇಕು.

iii. ನೋಂದಣಿ ಮತ್ತು ಲಾಗಿನ್ ರುಜುವಾತುಗಳನ್ನು ರಚಿಸಲು ನೀವು ಮಾನ್ಯವಾದ ಇ-ಮೇಲ್ ಐಡಿ ಮತ್ತು ಮೊಬೈಲ್ ಸಂಖ್ಯೆಯನ್ನು ಹೊಂದಿರುವಿರಿ ಎಂದು ಖಚಿತ ಪಡಿಸಿಕೊಳ್ಳಿ.

iv. ಒಮ್ಮೆ ನೀವು ನೋಂದಾಯಿಸಿದ ಮತ್ತು ನಿಮ್ಮ ಲಾಗಿನ್ ರುಜುವಾತುಗಳನ್ನು (USER ID & PASS WORD) ಪಡೆದ ನಂತರ, "ಅರ್ಜಿದಾರರ ವಿವರಗಳ ನೋಂದಣಿ (APPLICANT DETAILS REGISTRATION) " ಕ್ಲಿಕ್ ಮಾಡುವ ಮೂಲಕ ನಿಮ್ಮ ಸಂಪೂರ್ಣ ಮಾಹಿತಿಯನ್ನು ಭರ್ತಿ ಮಾಡಲು ಮುಂದುವರಿಯಿರಿ.

v. ಅಭ್ಯರ್ಥಿಗಳು ತಮ್ಮ ವಿವರಗಳನ್ನು ಒಮ್ಮೆ ಮಾತ್ರ ಭರ್ತಿ ಮಾಡಬೇಕಾಗುತ್ತದೆ ಮತ್ತು ಈ ವಿವರಗಳನ್ನು ಎಲ್ಲಾ ಭವಿಷ್ಯದ KPSC ಅಧಿಸೂಚನೆಗಳಿಗೆ ಬಳಸಲಾಗುತ್ತದೆ. ಆದ್ದರಿಂದ ನಿಮ್ಮ USER ID ಮತ್ತು Password ಗಳನ್ನು ಜೋಪಾನವಾಗಿ ಕಾಯ್ದಿಟ್ಟುಕೊಳ್ಳಿ, ನೀವು ನಿಮ್ಮ ಲಾಗಿನ್ ನಲ್ಲಿ ಮಾತ್ರ ನಿಮ್ಮ ಮಾಹಿತಿಯನ್ನು ನವೀಕರಿಸಬಹುದು.

vi. ನಿಮ್ಮ ಅರ್ಜಿದಾರರ ವಿವರ ಪುಟದಲ್ಲಿ ಅಗತ್ಯವಿರುವ ಎಲ್ಲಾ ಮಾಹಿತಿಯನ್ನು ಎಚ್ಚರಿಕೆಯಿಂದ ಒದಗಿಸಿ ಮತ್ತು "ಉಳಿಸು" (SAVE) ಬಟನ್ ಅನ್ನು ಬಳಸಿಕೊಂಡು ಅದನ್ನು ಉಳಿಸಲು ಖಚಿತಪಡಿಸಿಕೊಳ್ಳಿ.

vii. ನೀವು ಇತ್ತೀಚಿನ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರವನ್ನು ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕಾಗುತ್ತದೆ. ¨ಭಾವಚಿತ್ರವು 200 ಕೆಬಿ ಮೀರಬಾರದು ಮತ್ತು ಸಹಿ 70 ಕೆಬಿ ಒಳಗೆ ಇರಬೇಕು. ಗಮನಿಸಿ: ಕೇವಲ ಸಹಿಯನ್ನು ಮತ್ತು ಭಾವಚಿತ್ರವನ್ನು JPEG/JPG ಸ್ವರೂಪದಲ್ಲಿ ಅಪ್‌ಲೋಡ್ ಮಾಡಬೇಕು.

viii. ನಿಮ್ಮ ರುಜುವಾತುಗಳೊಂದಿಗೆ ಲಾಗಿನ್ ಮಾಡಿದ ನಂತರ, " Apply to Post " ಅಡಿಯಲ್ಲಿ ನೀವು ಸಕ್ರೀಯ ಅಧಿಸೂಚನೆಗಳನ್ನು ನೋಡುತ್ತೀರಿ. ನೀವು ಅರ್ಜಿ ಸಲ್ಲಿಸಲು ಬಯಸುವ ಅಧಿಸೂಚನೆಯ ಪಕ್ಕದಲ್ಲಿರುವ" Apply Post " ಲಿಂಕ್ ಅನ್ನು ಕ್ಲಿಕ್ ಮಾಡಿ.

ix. "Apply Post" ಲಿಂಕ್ ಅನ್ನು ಕ್ಲಿಕ್ ಮಾಡುವುದರಿಂದ ನೀವು ಅಧಿಸೂಚನೆಯ ಪ್ರಕಾರ ಅರ್ಹತಾ ಮಾನದಂಡಗಳನ್ನು ಪೂರೈಸಿದ್ದೀರಾ ಎಂದು ತಂತ್ರಾಂಶವು ಪರಿಶೀಲಿಸುತ್ತದೆ. ನೀವು ಅನರ್ಹರಾಗಿದ್ದರೆ, ಸಿಸ್ಟಮ್ ಸೂಕ್ತವಾದ ಸಂದೇಶವನ್ನು ಪ್ರದರ್ಶಿಸುತ್ತದೆ.

x. ಅರ್ಹತಾ ಷರತ್ತುಗಳನ್ನು ಪೂರೈಸಿರುವ ಅಭ್ಯರ್ಥಿಗಳಿಗೆ ಮಾತ್ರ ಅವರ ಅರ್ಜಿಯನ್ನು ಮುಂದುವರಿಸಲು ತಂತ್ರಾಂಶವು ಅನುಮತಿಸುತ್ತದೆ.

xi. ಅರ್ಜಿಯ ಅಂತಿಮ ಸಲ್ಲಿಕೆಗೆ ಮೊದಲು, ಅರ್ಜಿಯಲ್ಲಿನ ಎಲ್ಲಾ ಸಂಬಂಧಿತ ಕ್ಷೇತ್ರಗಳನ್ನು ಸರಿಯಾಗಿ ಭರ್ತಿ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಿ, ಏಕೆಂದರೆ ನಿರ್ದಿಷ್ಟ ಹುದ್ದೆಗೆ ಅರ್ಜಿ ಸಲ್ಲಿಸಿದ ನಂತರ ಬದಲಾವಣೆಗೆ ಅವಕಾಶವಿರುವುದಿಲ್ಲ.

xii. ನಿರ್ದಿಷ್ಟ ಅಧಿಸೂಚನೆಗಾಗಿ ಅರ್ಜಿ ಶುಲ್ಕವನ್ನು ಪಾವತಿಸಲು ವಿಫಲವಾದರೆ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುತ್ತದೆ. SC/ST/CAT-1/ ದೈಹಿಕ ಅಂಗವಿಕಲ ಅಭ್ಯರ್ಥಿಗಳಿಗೆ ಯಾವುದೇ ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ.

xiii. ಈ ಕೆಳಗಿನ ವಿಧಾನಗಳನ್ನು ಬಳಸಿಕೊಂಡು ಪರೀಕ್ಷಾ ಶುಲ್ಕವನ್ನು ಪಾವತಿಸಬಹುದು:

- ನೆಟ್ ಬ್ಯಾಂಕಿಂಗ್
- ಡೆಬಿಟ್ ಕಾರ್ಡ್
- ಕ್ರೆಡಿಟ್ ಕಾರ್ಡ್
- UPI

xiv. ಶುಲ್ಕವನ್ನು ಪಾವತಿಸಲು ಕೆಳಗಿನ ವಿಧಾನವನ್ನು ಅನುಸರಿಸಿ:

- ಹಂತ 1: ನೀವು ಅರ್ಜಿ ಸಲ್ಲಿಸಲು ಬಯಸುವ ನಿರ್ದಿಷ್ಟ ಅಧಿಸೂಚನೆಗಾಗಿ" APPLY Post" ಲಿಂಕ್ ಅನ್ನು ಕ್ಲಿಕ್ ಮಾಡಿ.
- ಹಂತ 2: ಆಯ್ಕೆ ಮಾಡಿದ ಅಧಿಸೂಚನೆಗಾಗಿ ಅಪ್ಲಿಕೇಶನ್ ಅನ್ನು ಪರಿಶೀಲಿಸಿ.
- ಹಂತ 3: "Pay Now" ಬಟನ್ ಅನ್ನು ಕ್ಲಿಕ್ ಮಾಡಿ, ಅದು ನಿಮ್ಮನ್ನು ಪಾವತಿ ಪರದೆಗೆ ಮರು ನಿರ್ದೇಶಿಸುತ್ತದೆ. ಅಲ್ಲಿ, ನೀವು UPI, ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಅಥವಾ ನೆಟ್ ಬ್ಯಾಂಕಿಂಗ್ ಮೂಲಕ ಪಾವತಿಸಲು ಆಯ್ಕೆ ಮಾಡಬಹುದು.
- ಹಂತ 4: ಪಾವತಿ ಯಶಸ್ವಿಯಾದಲ್ಲಿ, ಪಾವತಿಯ ಯಶಸ್ಸನ್ನು ದೃಢೀಕರಿಸುವ ಮೂಲಕ ನಿಮ್ಮನ್ನು ಅರ್ಜಿ ಹಾಕಲು ಮರು ನಿರ್ದೇಶಿಸಲಾಗುತ್ತದೆ.
- ಹಂತ 5: ನೀವು" Applied Post " ಗ್ರಿಡ್‌ನಿಂದ ಅರ್ಜಿಯನ್ನು (APPLICATION COPY) ಡೌನ್‌ಲೋಡ್ ಮಾಡಬಹುದು.
- ಹಂತ 6: ಪಾವತಿ ವಹಿವಾಟು ವಿಫಲವಾದಲ್ಲಿ, Applied Post ವಿಭಾಗದಲ್ಲಿ "Re-Pay" ಲಿಂಕ್ ಅನ್ನು ಕ್ಲಿಕ್ ಮಾಡಿ ಮತ್ತು ಹಂತ 3 ಅನ್ನು ಪುನರಾವರ್ತಿಸಿ.

xv. ಆಯೋಗದ ಅಧಿಸೂಚನೆಗೆ ಯಶಸ್ವಿಯಾಗಿ ಅರ್ಜಿ ಸಲ್ಲಿಸಿದ ನಂತರ ಆಯೋಗವು ಪರೀಕ್ಷೆಯನ್ನು ನಿಗದಿಪಡಿಸಿದಾಗ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ನೀವು ಸೂಚನೆಯನ್ನು SMS ಮೂಲಕ ಸ್ವೀಕರಿಸುತ್ತೀರಿ.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ತೊಂದರೆಗಳು ಎದುರಾದಲ್ಲಿ ಈ ಕೆಳಕಂಡ ಹೆಲ್ಪ್ ಲೈನ್ ನಂಬರ್ ಅನ್ನು ಸಂಪರ್ಕಿಸಲು ಸೂಚಿಸಿದೆ.

HELP LINE NO:080-30574957 / 30574901

ವಿಶೇಷ ಸೂಚನೆ:- ಅಭ್ಯರ್ಥಿಗಳು ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಯಾವುದೇ ಕಾರಣಕ್ಕೂ ಹೆಸರು, ಜನ್ಮದಿನಾಂಕ, ವಿಳಾಸ ಬದಲಾವಣೆ, ಮೀಸಲಾತಿ, ವಿದ್ಯಾರ್ಹತೆ ಮುಂತಾದ ವಿವರಗಳನ್ನು ತಿದ್ದುಪಡಿ ಮಾಡುವಂತೆ ಸಲ್ಲಿಸುವ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. ಆದರೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಈಗಾಗಲೇ ಸಲ್ಲಿಸಿರುವ ಅರ್ಜಿಯನ್ನು ಸ್ವಯಂ Delete ಮಾಡಿ ಹೊಸದಾಗಿ ಮತ್ತೊಂದು ಅರ್ಜಿಯನ್ನು ಸಲ್ಲಿಸಬಹುದಾಗಿದೆ. Delete ಮಾಡಿದ ಅರ್ಜಿಗೆ ಕಟ್ಟಿರುವ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಇತರೆ ಯಾವುದೇ ಹುದ್ದೆಗಳಿಗೆ ಸರಿದೂಗಿಸಲಾಗುವುದಿಲ್ಲ.

3.1) ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ ನೀಡಿರುವ ಅರ್ಜಿ ಭರ್ತಿ ಮಾಡುವ ಕುರಿತ ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಳ್ಳತಕ್ಕದ್ದು. ನೇಮಕಾತಿ ಪ್ರಾಧಿಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ.-1 | ಪ್ರವರ್ಗ-1 | Cat–1 | Category – I |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ ಅಭ್ಯರ್ಥಿ | PH | Physically Handicapped |
| ತೃ.ಲಿ | ತೃತೀಯ ಲಿಂಗ | TG | Transgender |

## 4. ಶುಲ್ಕ:-

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.300/- |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.150/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ. 50/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಯಿಂದ ವಿನಾಯಿತಿ ಇದೆ. |

4.1 ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕ ಪಾವತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4.2 ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ ತಾವು ಆಯ್ಕೆ ಬಯಸುವ ಹುದ್ದೆಗಳ ಆದ್ಯತೆಯನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿಯೇ ಕಡ್ಡಾಯವಾಗಿ ನಮೂದಿಸತಕ್ಕದ್ದು ಹಾಗೂ ನಮೂದಿಸಲಾದ ಆದ್ಯತೆಗೆ ಬದ್ಧವಾಗಿರತಕ್ಕದ್ದು. ಒಮ್ಮೆ ಆದ್ಯತೆಯನ್ನು ನಮೂದಿಸಿದ ನಂತರ ಯಾವುದೇ ಕಾರಣಕ್ಕೂ ತಿದ್ದುಪಡಿ / ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

## 5. ಅರ್ಹತಾ ಷರತ್ತುಗಳು:-

| | |
|---|---|
| ಅ) | ಭಾರತೀಯ ನಾಗರೀಕನಾಗಿರತಕ್ಕದ್ದು. |
| ಆ) | ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ. |
| ಇ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು. |
| ಈ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ |

| | |
|---|---|
| | ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. |

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

## 6. ಆಯ್ಕೆ ವಿಧಾನ –

ಸದರಿ ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವೆಗಳು (ನೇರ ನೇಮಕಾತಿ)(ಸಾಮಾನ್ಯ) ನಿಯಮಗಳು 2021ರ ನಿಯಮ 5 (ಡಿ) ಪ್ರಕಾರ "ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡಾವಾರು ಪ್ರಮಾಣದ ಆಧಾರದ ಮೇಲೆ (On the Basis of the percentage of marks secured in Competitive Examination)" ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

### 6.1. ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ:-

ಸದರಿ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರ ನಿಯಮ ಉಪ ನಿಯಮ-7 ರಲ್ಲಿ ನಿರ್ದಿಷ್ಟಪಡಿಸಲಾದಂತೆ, ಯಾರೇ ಅಭ್ಯರ್ಥಿಗಳು ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆಯನ್ನು ಪಡೆಯದ ಹೊರತು ಆಯ್ಕೆಗೆ ಅರ್ಹರಾಗುವುದಿಲ್ಲ. ಈ ಪರೀಕ್ಷೆಯು ಗರಿಷ್ಠ 150 ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಒಳಗೊಂಡಿದ್ದು, ಅಭ್ಯರ್ಥಿಯು ಈ ಪತ್ರಿಕೆಯಲ್ಲಿ ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಗಳಿಸಬೇಕು. ಈ ಪ್ರಶ್ನೆ ಪತ್ರಿಕೆಯನ್ನು ಎಸ್.ಎಸ್.ಎಲ್.ಸಿ. ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು.

ವಿಶೇಷ ಸೂಚನೆ: ಕನ್ನಡ ಭಾಷಾ ಪರೀಕ್ಷೆಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರನ್ವಯ ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 29-11-2022ರ ನಂತರ ನಡೆಸಿರುವ ಕನ್ನಡ ಭಾಷಾ ಪರೀಕ್ಷೆಗಳಿಗೆ ಹಾಜರಾಗಿ ಉತ್ತೀರ್ಣರಾಗಿದ್ದಲ್ಲಿ, ಅದರ ಫಲಿತಾಂಶವನ್ನು ಈ ಅಧಿಸೂಚನೆಯಲ್ಲಿನ ಹುದ್ದೆಗಳ ಕನ್ನಡ ಭಾಷಾ ಪರೀಕ್ಷೆಗೂ ಪರಿಗಣಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಆನ್ ಲೈನ್ ಅರ್ಜಿಯಲ್ಲಿನ ನಿಗದಿತ ಅಂಕಣದಲ್ಲಿ ಕನ್ನಡ ಭಾಷಾ ಪರೀಕ್ಷೆ ಕುರಿತಂತೆ ಕೇಳಿರುವ ಮಾಹಿತಿಯನ್ನು ತಪ್ಪದೇ ನಮೂದಿಸತಕ್ಕದ್ದು .

### 6.2 ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:

| | |
|---|---|
| (ಎ) | ಪರೀಕ್ಷೆಯು ತಲಾ 300 ಅಂಕಗಳ ಎರಡು ಲಿಖಿತ ಪ್ರಶ್ನೆ ಪತ್ರಿಕೆಗಳನ್ನು ಒಳಗೊಂಡಿದ್ದು, ವಸ್ತು ನಿಷ್ಠ ಬಹು ಆಯ್ಕೆ ಮಾದರಿಯಲ್ಲಿ ಇರುತ್ತವೆ. ಪ್ರತಿಯೊಂದು ಪ್ರಶ್ನೆಯು ಋಣಾತ್ಮಕ (Negative) ಅಂಕದ ಸ್ವರೂಪದ್ದಾಗಿದ್ದು, ಪ್ರತಿಯೊಂದು ತಪ್ಪಾದ ಉತ್ತರಕ್ಕೆ ಪ್ರಶ್ನೆಗಳಿಗೆ ಹಂಚಿಕೆ ಮಾಡಲಾದ ಅಂಕಗಳಲ್ಲಿ ನಾಲ್ಕನೇ ಒಂದು ಭಾಗದಷ್ಟು(1/4) ಅಂಕಗಳನ್ನು ಕಡಿತಗೊಳಿಸಲಾಗುವುದು. |

| ಪತ್ರಿಕೆ / Paper | ವಿಷಯ | ಅಂಕಗಳು / Marks | ಅವಧಿ / Duration ಗಂಟೆ / Hours |
|---|---|---|---|
| 1 | ಸಾಮಾನ್ಯ ಪತ್ರಿಕೆ General Paper | 300 | 1½ ಗಂಟೆ |
| 2 | ನಿರ್ದಿಷ್ಟ ಪತ್ರಿಕೆ Specific Paper | 300 | 2 ಗಂಟೆ |

**ಸೂಚನೆ:-** ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮವನ್ನು ಆಯೋಗದ ವೆಬ್‌ಸೈಟ್ https://kpsc.kar.nic.in/ syllabus ನಲ್ಲಿ **ಪ್ರಕಟಿಸಲಾಗಿದೆ** ಹಾಗೂ ಸದರಿ ಅಧಿಸೂಚನೆಯ ಕೊನೆಗೆ ಲಗತ್ತಿಸಲಾಗಿದೆ.

(ಬಿ) ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಮಾತ್ರ ಇರುತ್ತವೆ. ಪ್ರಶ್ನೆಪತ್ರಿಕೆಯಲ್ಲಿ ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡಿ ಅರ್ಥೈಸಿಕೊಳ್ಳುವುದು.

(ಸಿ) ಅಭ್ಯರ್ಥಿಯು ಅರ್ಹತೆಗಾಗಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿನ ಒಟ್ಟು ಅಂಕಗಳಲ್ಲಿ ಕನಿಷ್ಠ ಶೇಕಡ 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ.

6.3 ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್-ಓಎಂಆರ್ ಮಾದರಿ (Offline-OMR type) ಅಥವಾ ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ (Computer based recruitment test-CBRT) ಮುಖಾಂತರ ನಡೆಸಲಾಗುವುದು. ಈ ವಿಷಯದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ (Computer based recruitment test-CBRT) ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

## 6.4. ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರ:-

ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆಯೋಗವು ನಿಗದಿಪಡಿಸುವ ಯಾವುದೇ ಕೇಂದ್ರ ಸ್ಥಳದಲ್ಲಿ ನಡೆಸಲಾಗುವುದು ಹಾಗೂ ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರದ ಆಯ್ಕೆಗೆ ಅವಕಾಶವಿರುವುದಿಲ್ಲ.

ವಿಶೇಷ ಸೂಚನೆ:-

ಸದರಿ ಅಧಿಸೂಚನೆಯಲ್ಲಿನ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಒಂದೇ ಸಾಮಾನ್ಯ ಪತ್ರಿಕೆ (ಪತ್ರಿಕೆ-1) ಪರೀಕ್ಷೆಯನ್ನು ಬರೆಯತಕ್ಕದ್ದು. ಆದರ ಫಲಿತಾಂಶವನ್ನು ಅವರು ಅರ್ಜಿ ಸಲ್ಲಿಸಿರುವ ಸದರಿ ಅಧಿಸೂಚನೆಯಲ್ಲಿನ ಇತರ ಎಲ್ಲಾ ಹುದ್ದೆಗಳಿಗೂ ಪರಿಗಣಿಸಲಾಗುವುದು. ಆದರೆ ಅಭ್ಯರ್ಥಿಗಳು ಹುದ್ದೆವಾರು / ಇಲಾಖೆವಾರು ಪ್ರತ್ಯೇಕವಾದ ನಿರ್ದಿಷ್ಟ ಪತ್ರಿಕೆಯ (ಪತ್ರಿಕೆ-2) ಪರೀಕ್ಷೆಯನ್ನು ಬರೆಯಬೇಕಿರುತ್ತದೆ.

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ / ಸಾಮಾನ್ಯ ಪತ್ರಿಕೆ (ಪತ್ರಿಕೆ-1)ಯ ಪರೀಕ್ಷೆಗಳನ್ನು ದಿ: 11-08-2024ರಂದು ನಡೆಸಲಾಗುವುದು. ಪತ್ರಿಕೆ-2 ನಿರ್ದಿಷ್ಟ ಪತ್ರಿಕೆಗಳ ಪರೀಕ್ಷೆಗಳನ್ನು ಸೆಪ್ಟೆಂಬರ್ 2024ರ ಮಾಹೆಯಲ್ಲಿ ನಡೆಸಲು ಉದ್ದೇಶಿಸಿದ್ದು, ವಿವರವಾದ ವೇಳಾಪಟ್ಟಿಯನ್ನು ನಂತರದಲ್ಲಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

6.5 ಕನ್ನಡ ಭಾಷಾ ಪರೀಕ್ಷೆ ಮತ್ತು ಸಾಮಾನ್ಯ ಪತ್ರಿಕೆಯ ಸ್ಪರ್ಧಾತ್ಮಕ ಪರೀಕ್ಷೆಗೆ ಒಂದು ಪ್ರವೇಶ ಪತ್ರವನ್ನು ನೀಡಲಾಗುವುದು ಹಾಗೂ ಸದರಿ ಪರೀಕ್ಷೆಗಳನ್ನು ನಡೆಸಿದ ಸ್ವಲ್ಪ ದಿನಗಳ ನಂತರ ಹುದ್ದೆವಾರು ಪ್ರತ್ಯೇಕವಾಗಿ ನಿರ್ದಿಷ್ಟ ಪತ್ರಿಕೆಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುವುದು. ಈ ನಿರ್ದಿಷ್ಟ ಪತ್ರಿಕೆಗೆ ಅದೇ ನೋಂದಣಿ ಸಂಖ್ಯೆಯ (with same Roll Number) ಮತ್ತೊಂದು ಪ್ರವೇಶ ಪತ್ರವನ್ನು ನೀಡಲಾಗುವುದು. ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆಯೋಗದ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಆಯೋಗದ ವೆಬ್ ಸೈಟ್ ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾತಕ್ಕದ್ದು.

ಟಿಪ್ಪಣಿ:- ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

## 7. ಮೂಲ ದಾಖಲೆಗಳ ಪರಿಶೀಲನೆ:-

ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರ ಉಪಬಂಧಗಳಂತೆ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು. ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ಸ್ಪೀಡ್ ಪೋಸ್ಟ್ ಮೂಲಕ ರವಾನಿಸಲಾಗುವುದು ಅಥವಾ ಆಯೋಗವು ನಿರ್ಧರಿಸಿದಂತೆ ದಾಖಲೆಗಳನ್ನು ಪರಿಶೀಲಿಸಲು ಕ್ರಮ ವಹಿಸಲಾಗುವುದು.

## 8. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-

8(1) ಶೈಕ್ಷಣಿಕ ವಿದ್ಯಾರ್ಹತೆ:- ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ನಮೂದಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು ಹಾಗೂ ಈ ಸಂಬಂಧ ಅರ್ಜಿ ಸಲ್ಲಿಸುವಾಗ Convocation / PDC ಅನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.

8(2) ವಯೋಮಿತಿ:- ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ನಮೂದಿಸಿರುವ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಬಾರದು.

<table>
<tr><td colspan="2">ಅನುಸೂಚಿ</td></tr>
<tr><td colspan="2">I. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ- ಸಹಾಯಕ ಇಂಜಿನಿಯರ್ (ಸಿವಿಲ್)(Division-1)</td></tr>
<tr><td>1)ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ನಿಗದಿಪಡಿಸಿದ ವಿದ್ಯಾರ್ಹತೆ</td><td>Must be a holder of Engineering Degree in Civil Engineering or equivalent qualification from a University established by law in India and recognised by AICTE.<br>Equivalent qualification:-<br>B.E/B.Tech -Construction Technology and Management.</td></tr>
<tr><td>2) ವೇತನ ಶ್ರೇಣಿ</td><td>ರೂ.43,100-83,900</td></tr>
<tr><td>3)ಹುದ್ದೆಗಳ ವರ್ಗೀಕರಣ</td><td>ಉಳಿಕೆ ಮೂಲ ವೃಂದ –92 ಹುದ್ದೆಗಳು
<table>
<tr><td>ಮೀಸಲಾತಿ</td><td>ಇ</td><td>ಮ</td><td>ಗ್ರಾ</td><td>ಮಾ.ಸೈ.</td><td>ಅಂ.ವಿ.</td><td>ಕಮಾಅ</td><td>ತೃಲಿ</td><td>ಒಟ್ಟು</td></tr>
<tr><td>ಪ.ಜಾ</td><td>2</td><td>6</td><td>4</td><td>1</td><td>1*</td><td>1</td><td>-</td><td>15</td></tr>
<tr><td>ಪ.ಪಂ.</td><td>2</td><td>2</td><td>2</td><td>-</td><td>1*</td><td>-</td><td>-</td><td>7</td></tr>
<tr><td>ಪ್ರ.1</td><td>1</td><td>1</td><td>1</td><td>-</td><td>1*</td><td>-</td><td>-</td><td>4</td></tr>
<tr><td>ಪ್ರ.2ಎ</td><td>2</td><td>5</td><td>4</td><td>1</td><td>1*</td><td>1</td><td>-</td><td>14</td></tr>
<tr><td>ಪ್ರ.2ಬಿ</td><td>1</td><td>1</td><td>1</td><td>-</td><td>1*</td><td>-</td><td>-</td><td>4</td></tr>
<tr><td>ಪ್ರ.3ಎ</td><td>1</td><td>1</td><td>1</td><td>-</td><td>-</td><td>-</td><td>-</td><td>3</td></tr>
<tr><td>ಪ್ರ.3ಬಿ</td><td>1</td><td>1</td><td>1</td><td>-</td><td>1*</td><td>-</td><td>-</td><td>4</td></tr>
<tr><td>ಸಾ.ಅ.</td><td>9</td><td>13</td><td>10</td><td>4</td><td>1* / 1**</td><td>2</td><td>1</td><td>41</td></tr>
<tr><td>ಒಟ್ಟು</td><td>19</td><td>30</td><td>24</td><td>6</td><td>8</td><td>4</td><td>1</td><td>92</td></tr>
<tr><td colspan="9">ಅಧಿಸೂಚನೆ ಸಂಖ್ಯೆ WCD 118 PHP 2020 ದಿ: 13-01-2022 ರಂತೆ :-<br>* Low Vision ಅಭ್ಯರ್ಥಿಗಳಿಗೆ,<br>** OA, OL, Lc,Dw,AAV ಅಭ್ಯರ್ಥಿಗಳಿಗೆ</td></tr>
</table>
</td></tr>
<tr><td>4) ವಯೋಮಿತಿ, ವಯಸ್ಸು ವರ್ಷಗಳಲ್ಲಿ</td><td>ಕನಿಷ್ಠ – 18 ವರ್ಷಗಳು, ಗರಿಷ್ಠ – 35 ವರ್ಷಗಳು,<br>ಪ್ರ.2ಎ, ಪ್ರ.2ಬಿ , ಪ್ರ.3ಎ, ಪ್ರ.3ಬಿ – 38 ವರ್ಷಗಳು,<br>ಪ.ಜಾ, ಪ.ಪಂ., ಪ್ರವರ್ಗ-1 - 40 ವರ್ಷಗಳು</td></tr>
</table>

## II. ಜಲ ಸಂಪನ್ಮೂಲ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್ (ಸಿವಿಲ್) (ವಿಭಾಗ-1)

**1) ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ನಿಗದಿಪಡಿಸಿರುವ ವಿದ್ಯಾರ್ಹತೆ**

Must be holder of a degree in Civil Engineering or Construction Technology & Management or Building & Construction Technology or Civil Engineering and Planning or Civil Technology or Construction Technology or Construction Engineering and Management or Geomechanics and Structures or Structural and Foundation Engineering and Construction granted by a University established by law in India and institute approved by AICTE, New Delhi or A Diploma Certificate granted by the Institution of Engineers (India) that he has passed Parts A & B of the Associate Membership Examination of the Institution of Engineers (India).

**2) ವೇತನ ಶ್ರೇಣಿ**

ರೂ.43,100-83,900

**3) ಹುದ್ದೆಗಳ ಸಂಖ್ಯೆ, ವರ್ಗೀಕರಣ ಮತ್ತು ವರ್ಗೀಕರಣದ ಪ್ರಾರಂಭಿಕ ಬಿಂದು**

ಉಳಿಕೆ ಮೂಲ ವೃಂದ –84 ಹುದ್ದೆಗಳು

| ಮೀಸಲಾತಿ | ಇ | ಮ | ಗ್ರಾ | ಮಾಸೈ | ಅಂ.ವಿ | ಕ.ಮಾ | ತೃ.ಲಿ | ಒಟ್ಟು |
|---|---|---|---|---|---|---|---|---|
| ಪ.ಜಾ | 2 | 5 | 4 | 1 | 1* | 1 | - | 14 |
| ಪ.ಪಂ. | 2 | 2 | 2 | - | 1* | - | - | 07 |
| ಪ್ರ.1 | 1 | 1 | 1 | - | 1* | - | - | 04 |
| ಪ್ರ.2ಎ | 2 | 5 | 3 | 1 | 1* | - | - | 12 |
| ಪ್ರ.2ಬಿ | 1 | 1 | 1 | - | - | - | - | 03 |
| ಪ್ರ.3ಎ | 1 | 1 | 1 | - | - | - | - | 03 |
| ಪ್ರ.3ಬಿ | 1 | 1 | 1 | - | 1* | - | - | 04 |
| ಸಾ.ಅ. | 7 | 12 | 10 | 3 | 1*/ 1** | 2 | 1 | 37 |
| ಒಟ್ಟು | 17 | 28 | 23 | 05 | 07 | 03 | 01 | 84 |

* - Low Vision
** - OA, OL, Dw, AAV, CP, LC, SI/SD Without Neurologcal / limb dysfunction, SI/SD with Neurological / limb dysfunction having OA, OL

ಉಳಿಕೆ ಮೂಲ ವೃಂದ –06 ಹುದ್ದೆಗಳು (ಸೇವಾನಿರತ ಅಭ್ಯರ್ಥಿಗಳಿಗೆ)

| ಮೀಸಲಾತಿ | ಇ | ಮ | ಗ್ರಾ | ಒಟ್ಟು |
|---|---|---|---|---|
| ಪ.ಜಾ | 1 | - | - | 01 |
| ಪ.ಪಂ. | 1 | - | - | 01 |
| ಪ್ರ.1 | 1 | - | - | 01 |
| ಸಾ.ಅ. | 1 | 1 | 1 | 03 |
| ಒಟ್ಟು | 04 | 01 | 01 | 06 |

ಸೂಚನೆ:- ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಮೇಲ್ಕಂಡ ಸೇವಾ ನಿರತ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಹುದ್ದೆಗಳನ್ನು ನೇರ ನೇಮಕಾತಿಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**4) ವಯೋಮಿತಿ, ವಯಸ್ಸು ವರ್ಷಗಳಲ್ಲಿ**

ಕನಿಷ್ಠ – 18 ವರ್ಷಗಳು,ಗರಿಷ್ಠ – 35 ವರ್ಷಗಳು,

ಪ್ರ.2ಎ, ಪ್ರ.2ಬಿ , ಪ್ರ.3ಎ, ಪ್ರ.3ಬಿ – 38 ವರ್ಷಗಳು,

ಪ.ಜಾ, ಪ.ಪಂ., ಪ್ರವರ್ಗ-1 - 40 ವರ್ಷಗಳು

## III. ಭೂಮಾಪನ, ಕಂದಾಯ ವ್ಯವಸ್ಥೆ, ಮತ್ತು ಭೂ ದಾಖಲೆಗಳ ಇಲಾಖೆ- ಭೂ ದಾಖಲೆಗಳ ಸಹಾಯಕ ನಿರ್ದೇಶಕರು

1) ನಿಗದಿಪಡಿಸಿದ ವಿದ್ಯಾರ್ಹತೆ: Must be a holder of degree in Engineering (Civil) or B-Tech (Civil) or AMIE (Civil) with an aggregate marks of not less than Sixty percent.

2) ವೇತನ ಶ್ರೇಣಿ: ರೂ: 43100- 83900

3) ಹುದ್ದೆಗಳ ವರ್ಗೀಕರಣ

ಉಳಿಕೆ ಮೂಲ ವೃಂದ –24 ಹುದ್ದೆಗಳು

| ಮೀಸಲಾತಿ | ಇ | ಮ | ಗ್ರಾ | ಮಾ.ಸೈ. | ಅಂ.ವಿ. | ಒಟ್ಟು |
|---|---|---|---|---|---|---|
| ಪ.ಜಾ | 1 | 1 | 1 | - | * | 4 |
| ಪ.ಪಂ. | 1 | 1 | - | - | - | 2 |
| ಪ್ರ.1 | 1 | - | - | - | - | 1 |
| ಪ್ರ.2ಎ | 1 | 1 | 1 | - | - | 3 |
| ಪ್ರ.2ಬಿ | 1 | - | - | - | - | 1 |
| ಪ್ರ.3ಎ | 1 | - | - | - | - | 1 |
| ಪ್ರ.3ಬಿ | 1 | - | - | - | - | 1 |
| ಸಾ.ಅ. | 2 | 4 | 3 | 1 | 1* | 11 |
| ಒಟ್ಟು | 9 | 7 | 5 | 1 | 2 | 24 |

* WCD 111 PHP 2022 Dt:19-08-2023 ರ ಪ್ರಕಾರ Low Vision ಅಭ್ಯರ್ಥಿಗಳಿಗೆ

4) ವಯೋಮಿತಿ, ವಯಸ್ಸು ವರ್ಷಗಳಲ್ಲಿ:

ಕನಿಷ್ಠ – 18 ವರ್ಷಗಳು,ಗರಿಷ್ಠ – 35 ವರ್ಷಗಳು,

ಪ್ರ.2ಎ, ಪ್ರ.2ಬಿ , ಪ್ರ.3ಎ, ಪ್ರ.3ಬಿ – 38 ವರ್ಷಗಳು,

ಪ.ಜಾ, ಪ.ಪಂ., ಪ್ರವರ್ಗ-1 - 40 ವರ್ಷಗಳು

## IV. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಪತ್ರಾಂಕಿತ ವ್ಯವಸ್ಥಾಪಕರು/ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು- Gazetted Manager /Taluk Backward Classes welfare Officer

1) ನಿಗದಿಪಡಿಸಿದ ವಿದ್ಯಾರ್ಹತೆ: Must be holder of a Bachelor Degree.

2) ವೇತನ ಶ್ರೇಣಿ: ರೂ:43100- 83900

3) ಹುದ್ದೆಗಳ ವರ್ಗೀಕರಣ

ಉಳಿಕೆ ಮೂಲ ವೃಂದ –21 ಹುದ್ದೆಗಳು

| ಮೀಸಲಾತಿ | ಇ | ಮ | ಗ್ರಾ | ಮಾ.ಸೈ | ಅಂ.ವಿ | ಒಟ್ಟು |
|---|---|---|---|---|---|---|
| ಪ.ಜಾ | 1 | 1 | 1 | - | - | 3 |
| ಪ.ಪಂ. | 1 | - | - | - | - | 1 |
| ಪ್ರ.1 | 1 | - | - | - | - | 1 |
| ಪ್ರ.2ಎ | 1 | 1 | 1 | - | - | 3 |
| ಪ್ರ.2ಬಿ | 1 | - | - | - | - | 1 |
| ಪ್ರ.3ಎ | 1 | - | - | - | - | 1 |
| ಪ್ರ.3ಬಿ | 1 | - | - | - | - | 1 |
| ಸಾ.ಅ. | 2 | 3 | 3 | 1 | 1* | 10 |
| ಒಟ್ಟು | 9 | 5 | 5 | 1 | 1 | 21 |

* ಅಧಿಸೂಚನೆ ಸಂಖ್ಯೆ WCD 118 PHP 2020 ದಿನಾಂಕ: 11-05-2022 ರ ಪ್ರಕಾರ Blind / Low Vision ಅಭ್ಯರ್ಥಿಗಳಿಗೆ

| | |
|---|---|
| 4. ವಯೋಮಿತಿ, ವಯಸ್ಸು ವರ್ಷಗಳಲ್ಲಿ | ಕನಿಷ್ಠ – 18 ವರ್ಷಗಳು,ಗರಿಷ್ಠ – 35 ವರ್ಷಗಳು,<br>ಪ್ರ.2ಎ, ಪ್ರ.2ಬಿ , ಪ್ರ.3ಎ, ಪ್ರ.3ಬಿ – 38 ವರ್ಷಗಳು,<br>ಪ.ಜಾ, ಪ.ಪಂ., ಪ್ರವರ್ಗ-1 - 40 ವರ್ಷಗಳು |

## V. ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಸಹಾಯಕ ನಿರ್ದೇಶಕರು

| | |
|---|---|
| 1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | Must be holder of B.E degree in any branch of Engineering or B.Tech or Masters Degree in Business Management. |
| 2) ವೇತನ ಶ್ರೇಣಿ | ರೂ:45,300- 88,300 |

3) ಹುದ್ದೆಗಳ ವರ್ಗೀಕರಣ

ಉಳಿಕೆ ಮೂಲ ವೃಂದ –20 ಹುದ್ದೆಗಳು

| ಮೀಸಲಾತಿ | ಇ | ಮ | ಗ್ರಾ | ಮಾ.ಸೈ. | ಅಂ.ವಿ. | ಒಟ್ಟು |
|---|---|---|---|---|---|---|
| ಪ.ಜಾ | 1 | 1 | 1 | - | - | 3 |
| ಪ.ಪಂ. | 1 | | - | - | - | 2 |
| ಪ್ರ.1 | 1 | - | - | - | - | 1 |
| ಪ್ರ.2ಎ | 1 | 1 | | - | - | 2 |
| ಪ್ರ.2ಬಿ | 1 | - | - | - | - | 1 |
| ಪ್ರ.3ಎ | 1 | - | - | - | - | 1 |
| ಪ್ರ.3ಬಿ | 1 | - | - | - | - | 1 |
| ಸಾ.ಅ. | 2 | 3 | 3 | - | 1* | 09 |
| ಒಟ್ಟು | 9 | 6 | 4 | - | 1 | 20 |

* ಅಧಿಸೂಚನೆ ಸಂಖ್ಯೆ WCD 111 PHP 2022 ದಿನಾಂಕ: 17-08-2022 ರ ಪ್ರಕಾರ Blind / Low Vision ಅಭ್ಯರ್ಥಿಗಳಿಗೆ

| | |
|---|---|
| 4) ವಯೋಮಿತಿ, ವಯಸ್ಸು ವರ್ಷಗಳಲ್ಲಿ | ಕನಿಷ್ಠ – 18 ವರ್ಷಗಳು,ಗರಿಷ್ಠ – 35 ವರ್ಷಗಳು,<br>ಪ್ರ.2ಎ, ಪ್ರ.2ಬಿ , ಪ್ರ.3ಎ, ಪ್ರ.3ಬಿ – 38 ವರ್ಷಗಳು,<br>ಪ.ಜಾ, ಪ.ಪಂ., ಪ್ರವರ್ಗ-1 - 40 ವರ್ಷಗಳು |

## VI. ಜಲ ಸಂಪನ್ಮೂಲ ಇಲಾಖೆ- ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) (ವಿಭಾಗ-1)

| | |
|---|---|
| 1) ನಿಗದಿಪಡಿಸಿರುವ ವಿದ್ಯಾರ್ಹತೆ | Must be holder of a degree in Mechanical Engineering granted by a University established by law in India and institute approved by AICTE, New Delhi or a Diploma Certificate granted by the Institution of Engineers (India) that he has passed Parts A & B of the Associate Membership Examination of the Institution of Engineers (India). |
| 2) ವೇತನ ಶ್ರೇಣಿ | ರೂ.43,100-83,900 |

3) ಹುದ್ದೆಗಳ ಸಂಖ್ಯೆ, ವರ್ಗೀಕರಣ ಮತ್ತು ವರ್ಗೀಕರಣದ ಪ್ರಾರಂಭಿಕ ಬಿಂದು

ಉಳಿಕೆ ಮೂಲ ವೃಂದ –09 ಹುದ್ದೆಗಳು

| ಮೀಸಲಾತಿ | ಇ | ಮ | ಗ್ರಾ | ಅಂ.ವಿ | ಒಟ್ಟು |
|---|---|---|---|---|---|
| ಪ.ಜಾ | 01 | 01 | - | - | 02 |
| ಪ.ಪಂ. | 01 | - | - | - | 01 |
| ಪ್ರ.1 | 01 | - | - | - | 01 |
| ಪ್ರ.2ಎ | 01 | - | - | - | 01 |
| ಸಾ.ಅ. | 01 | 01 | 01 | 01* | 04 |
| ಒಟ್ಟು | 05 | 02 | 01 | 01 | 09 |

* Low Vision ಅಭ್ಯರ್ಥಿಗಳು

ಉಳಿಕೆ ಮೂಲ ವೃಂದ –01ಹುದ್ದೆ (ಸೇವಾನಿರತ ಅಭ್ಯರ್ಥಿಗಳಿಗೆ)

ಪರಿಶಿಷ್ಟ ಜಾತಿ/ ಇತರೆ - 01 ಹುದ್ದೆ.

| | |
|---|---|
| | ಸೂಚನೆ:- ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಮೇಲ್ಕಂಡ ಸೇವಾ ನಿರತ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಹುದ್ದೆಗಳನ್ನು ನೇರ ನೇಮಕಾತಿಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. |
| 4) ವಯೋಮಿತಿ, ವಯಸ್ಸು ವರ್ಷಗಳಲ್ಲಿ | ಕನಿಷ್ಠ – 18 ವರ್ಷಗಳು,ಗರಿಷ್ಠ – 35 ವರ್ಷಗಳು,<br>ಪ್ರ.2ಎ, ಪ್ರ.2ಬಿ , ಪ್ರ.3ಎ, ಪ್ರ.3ಬಿ – 38 ವರ್ಷಗಳು,<br>ಪ.ಜಾ, ಪ.ಪಂ., ಪ್ರವರ್ಗ-1 - 40 ವರ್ಷಗಳು |

## VII. ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ - ಕಾರ್ಖಾನೆಗಳ ಸಹಾಯಕ ನಿರ್ದೇಶಕರು

| | |
|---|---|
| 1) ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ನಿಗದಿಪಡಿಸಲಾದ ವಿದ್ಯಾರ್ಹತೆ | ಭಾರತದಲ್ಲಿ ಕಾನೂನಿನ್ವಯ ಸ್ಥಾಪನಗೊಂಡ ಹಾಗೂ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ:<br>1) ಮೈಕ್ಯಾನಿಕಲ್ ಇಂಜಿನಿಯರಿಂಗ್ ಅಥವಾ<br>2) ಕೆಮಿಕಲ್ ಇಂಜಿನಿಯರಿಂಗ್ ಅಥವಾ<br>3)ಇಂಡಸ್ಟ್ರಿಯಲ್ ಪ್ರೊಡಕ್ಷನ್ ಅಥವಾ<br>4) ಇಂಡಸ್ಟ್ರಿಯಲ್ ಇಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ ನಲ್ಲಿ ನಾಲ್ಕು ವರ್ಷಗಳ ಪೂರ್ಣ ಪ್ರಮಾಣದ ಇಂಜಿನಿಯರಿಂಗ್ ಪದವಿಯನ್ನು ಪಡೆದಿರಬೇಕು.<br>(ಸೂಚನೆ:- ಇಲಾಖೆಯ ಸ್ಪಷ್ಟೀಕರಣದಂತೆ Lateral Entry ಮೂಲಕ B.Tech/ BE ಎರಡನೇ ವರ್ಷದ / 3ನೇ ಸೆಮಿಸ್ಟರ್ ಇಂಜಿನಿಯರಿಂಗ್ ಕೋರ್ಸ್‌ಗೆ ಪ್ರವೇಶ ಪಡೆದು ಉತ್ತೀರ್ಣರಾದ ಅಭ್ಯರ್ಥಿಗಳನ್ನು ಸಹ ಪರಿಗಣಿಸಲಾಗುವುದು.) |
| 2) ವೇತನ ಶ್ರೇಣಿ | ರೂ.43,100-83,900 |
| 3) ಹುದ್ದೆಗಳ ವರ್ಗೀಕರಣ | ಉಳಿಕೆ ಮೂಲ ವೃಂದ –07 ಹುದ್ದೆಗಳು |

| ಮೀಸಲಾತಿ | ಇತರೆ | ಮಹಿಳೆ | ಗ್ರಾ | ಒಟ್ಟು |
|---|---|---|---|---|
| ಪ್ರ.ಜಾ | 01 | - | - | 01 |
| ಪ.ಪಂ | 01 | - | | 01 |
| ಪ್ರ.1 | 01 | - | - | 01 |
| ಪ್ರ.2ಎ | 01 | - | - | 01 |
| ಸಾ.ಅ. | 01 | 01 | 01 | 03 |
| ಒಟ್ಟು | 05 | 01 | 01 | 07 |

| | |
|---|---|
| 4) ವಯೋಮಿತಿ | ಕನಿಷ್ಠ - 18 ವರ್ಷಗಳು, ಗರಿಷ್ಠ - 35 ವರ್ಷಗಳು<br>ಪ್ರ. 2ಎ/ 2ಬಿ / 3ಎ/ 3ಬಿ : 38 ವರ್ಷಗಳು<br>ಪ.ಜಾ/ಪ.ಪಂ/ಪ್ರ.1:- 40 ವರ್ಷಗಳು |

## VIII.ಕಾರ್ಖಾನೆಗಳು,ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ- ಬಾಯ್ಲರುಗಳ ಸಹಾಯಕ ನಿರ್ದೇಶಕರು

| | |
|---|---|
| 1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | ಭಾರತದಲ್ಲಿ ಕಾನೂನಿನ್ವಯ ಸ್ಥಾಪನೆಗೊಂಡ ಹಾಗೂ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ:<br>1) ಮೆಕ್ಯಾನಿಕಲ್ ಇಂಜಿನಿಯರಿಂಗ್ ಅಥವಾ<br>2) ಪ್ರೊಡಕ್ಷನ್ ಇಂಜಿನಿಯರಿಂಗ್ ಅಥವಾ<br>3) ಪವರ್ ಪ್ಲಾಂಟ್ ಇಂಜಿನಿಯರಿಂಗ್ ಅಥವಾ<br>4) ಮೆಟಲರ್ಜಿಕಲ್ ಇಂಜಿನಿಯರಿಂಗ್ ನಲ್ಲಿ ನಾಲ್ಕು ವರ್ಷಗಳ ಪೂರ್ಣ ಪ್ರಮಾಣದ ಇಂಜಿನಿಯರಿಂಗ್ ಪದವಿಯನ್ನು ಪಡೆದಿರಬೇಕು.<br>(ಸೂಚನೆ:- ಇಲಾಖೆಯ ಸ್ಪಷ್ಟೀಕರಣದಂತೆ Lateral Entry ಮೂಲಕ B.Tech/ BE ಎರಡನೇ ವರ್ಷದ / 3ನೇ ಸೆಮಿಸ್ಟರ್ ಇಂಜಿನಿಯರಿಂಗ್ ಕೋರ್ಸ್ ಪ್ರವೇಶ ಪಡೆದು ಉತ್ತೀರ್ಣರಾದ ಅಭ್ಯರ್ಥಿಗಳನ್ನು ಸಹ ಪರಿಗಣಿಸಲಾಗುವುದು.) |

| | |
|---|---|
| 2) ವೇತನ ಶ್ರೇಣಿ | ರೂ: 43100--83900 |
| 3) ಹುದ್ದೆಗಳ ವರ್ಗೀಕರಣ | ಉಳಿಕೆ ಮೂಲ ವೃಂದ –03 ಹುದ್ದೆಗಳು<br><br>ಮೀಸಲಾತಿ / ಇತರೆ<br>ಪ್ರ.ಜಾ – 01<br>ಪ.ಪಂ – 01<br>ಸಾಮಾನ್ಯ ಅಭ್ಯರ್ಥಿ – 01<br>ಒಟ್ಟು – 03 |
| 4) ವಯೋಮಿತಿ, ವಯಸ್ಸು ವರ್ಷಗಳಲ್ಲಿ | ಕನಿಷ್ಠ – 18 ವರ್ಷಗಳು, ಗರಿಷ್ಠ – 35 ವರ್ಷಗಳು,<br>ಪ್ರ.2ಎ, ಪ್ರ.2ಬಿ , ಪ್ರ.3ಎ, ಪ್ರ.3ಬಿ : 38 ವರ್ಷಗಳು,<br>ಪ.ಜಾ, ಪ.ಪಂ., ಪ್ರವರ್ಗ-1 : 40 ವರ್ಷಗಳು |

**IX. ಅಂತರ್ಜಲ ನಿರ್ದೇಶನಾಲಯದಲ್ಲಿ ಭೂ ವಿಜ್ಞಾನಿ**

| | |
|---|---|
| 1.ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | Must be a holder of Post Graduate Degree in :-<br>1) Geology or<br>2) Applied Geology or<br>Equivalent Qualifications:-<br>1. M.Sc (Earth Science & Resource Management) or<br>2. M.Sc (Marine Geology) or<br>3. M.Sc (Earth Science & Natural Resource) or<br>4. M.Sc (Remote Sensing Application) |
| 2.ವೇತನ ಶ್ರೇಣಿ | ರೂ: 43100- 83900 |
| 3.ಹುದ್ದೆಗಳ ವರ್ಗೀಕರಣ | ಉಳಿಕೆ ಮೂಲ ವೃಂದ – 10 ಹುದ್ದೆಗಳು |

| ಮೀಸಲಾತಿ | ಇ | ಮ | ಗ್ರಾ | ಅಂ.ವಿ. | ಒಟ್ಟು |
|---|---|---|---|---|---|
| ಪ.ಜಾ | 1 | 1 | - | - | 2 |
| ಪ.ಪಂ. | 1 | - | - | - | 1 |
| ಪ್ರ.1 | 1 | - | - | - | 1 |
| ಪ್ರ.2ಎ | 1 | - | - | - | 1 |
| ಸಾ.ಅ. | 1 | 2 | 1 | 1* | 5 |
| ಒಟ್ಟು | 5 | 3 | 1 | 1 | 10 |

* D, HH, OA, OL, CP, LC, DW, AAV, SLD, MI, ASD(M) ಅಭ್ಯರ್ಥಿಗಳಿಗೆ

| | |
|---|---|
| 4.ವಯೋಮಿತಿ, ವಯಸ್ಸು ವರ್ಷಗಳಲ್ಲಿ | ಕನಿಷ್ಠ – 18 ವರ್ಷಗಳು,ಗರಿಷ್ಠ : 35 ವರ್ಷಗಳು,<br>ಪ್ರ.2ಎ, ಪ್ರ.2ಬಿ , ಪ್ರ.3ಎ, ಪ್ರ.3ಬಿ : 38 ವರ್ಷಗಳು,<br>ಪ.ಜಾ, ಪ.ಪಂ., ಪ್ರವರ್ಗ-1 : 40 ವರ್ಷಗಳು |

8.3 ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಮತ್ತು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿ ರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |

| | | |
|---|---|---|
| (ಆ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| (ಇ) | National Cadet Corps ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಉ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಋ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು). | 10 ವರ್ಷಗಳು |
| (ಋ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

## 9. <u>ಮೀಸಲಾತಿ ಪ್ರಮಾಣ ಪತ್ರಗಳು:-</u>

<table>
<tr><td>(1) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು</td><td>ಜಾತಿ ಮೀಸಲಾತಿ ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರಬೇಕು.<br><u>ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು :-</u>
<table>
<tr><td>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ `ಡಿ'</td></tr>
<tr><td>ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ `ಇ</td></tr>
<tr><td>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು</td><td>ನಮೂನೆ `ಎಫ್'</td></tr>
</table>
* ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದ್ದು, ನಿಗದಿಪಡಿಸಿದ ನಮೂನೆಗಳನ್ನು ಹೊರತುಪಡಿಸಿ ಇತರೆ ನಮೂನೆಗಳಲ್ಲಿ ಪಡೆಯುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.</td></tr>
<tr><td></td><td>ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ <u>(Government Notification No SWD 155 BCA 2012 Dt: 17-02-2012 ರನ್ವಯ)</u> ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು.<br><u>ವಿಶೇಷ ಸೂಚನೆ:-</u> ಸರ್ಕಾರಿ ಆದೇಶ ಸಂಖ್ಯೆ: ಸಕಇ 179 ಬಿಸಿಎ 2010, ಬೆಂಗಳೂರು ದಿ: 16.07.2011ರ ಆದೇಶದಲ್ಲಿ ಬಲಿಜ ಮತ್ತು ಉಪ ಜಾತಿಗಳಾದ ಬಲಜಿಗ/ ಬಣಜಿಗ/ ಗೌಡಬಣಜಿಗ, ನಾಯ್ಡು, ತೆಲಗ ಬಲಿಜ/ ತೆಲಗ ಬಣಜಿಗ/ ಶೆಟ್ಟಿಬಲಿಜ, ಶೆಟ್ಟಿ ಬಣಜಿಗ/ ಬಣಜಿಗ ಶೆಟ್ಟಿ, ದಾಸರ ಬಲಿಜ/ ದಾಸರ ಬಲಜಿಗ/ ದಾರಸ ಬಣಜಿಗ/ ದಾಸಬಣಜಿಗ, ಕಸ್ಬನ್,</td></tr>
</table>

| | |
|---|---|
| | ಮುನ್ನೂರ/ ಮುನ್ನಾರ್/ ಮುನ್ನೂರ್‌ಕಾಪು, ಬಳಿಗಾರ/ ಬಳೆಬಣಜಿಗ/ ಬಳೆಬಲಜಿಗ/ ಬಳೆ ಜೆಟ್ಟಿ/ ಬಣಗಾರ, ರೆಡ್ಡಿ (ಬಲಿಜ), ಜನಪ್ಪನ್, ಉಪ್ಪಾರ (ಬಲಿಜ), ತುಲೇರು (ಬಲಿಜ) ಉಪ ಜಾತಿಗಳನ್ನು ಶಿಕ್ಷಣದ ಸಲುವಾಗಿ 2ಎ ಮೀಸಲಾತಿಯಡಿ ಹಾಗೂ ಉದ್ಯೋಗದ ಸಲುವಾಗಿ 3ಎ ಮೀಸಲಾತಿಯಡಿ ಪರಿಗಣಿಸಲಾಗಿದೆ. ಆದ್ದರಿಂದ ಮೇಲ್ಕಂಡ ಸರ್ಕಾರಿ ಆದೇಶದನುಸಾರ ಸದರಿ ಜಾತಿ/ಉಪಜಾತಿಯ ಅಭ್ಯರ್ಥಿಗಳು ಉದ್ಯೋಗದಲ್ಲಿನ ಮೀಸಲಾತಿಗಾಗಿ ಆನ್ ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ 3ಎ ಮೀಸಲಾತಿ ಕೋರತಕ್ಕದ್ದು ಹಾಗೂ ಶಿಕ್ಷಣದ ಸಲುವಾಗಿ ಪಡೆದ 2ಎ ಮೀಸಲಾತಿ ಪ್ರಮಾಣ ಪತ್ರವನ್ನು ಪರಿಗಣಿಸಲಾಗುವುದಿಲ್ಲ. |
| | ಪ.ಜಾ/ಪ.ಪಂ/ಪ್ರ.1 ರ ಅಭ್ಯರ್ಥಿಗಳು ಪಡೆದಿರುವ / ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆವಿಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011 ದಿನಾಂಕ 22-02-2012). |
| (2) ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ:13-02-2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. |
| | ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನುಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಅಭ್ಯರ್ಥಿಗಳು ನಮೂನೆ-1 ರಲ್ಲಿಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು. |
| | ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. |
| | ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಅಸಿಂಧುವಾದಲ್ಲಿ, ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ. |
| (3) ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). |
| (4) ಮಾಜಿ ಸೈನಿಕರಿಗೆ ಮೀಸಲಾತಿ | (1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ |

| | |
|---|---|
| | ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು<br>(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ<br>ಅಥವಾ<br>(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು<br>ಅಥವಾ<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ<br>ಅಥವಾ<br>(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.<br>(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.<br>(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯ ಹೊಂದಿ ಬಿಡುಗಡೆಯಾದ ವ್ಯಕ್ತಿ.<br>(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು |
| | <u>ವಿವರಣೆ</u> :- ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.<br>ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು. |
| | 2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. |
| | 3) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು(ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ / ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. |
| | 4) ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ / ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. |
| (5) ಅಂಗವಿಕಲ ಅಭ್ಯರ್ಥಿ | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 149 ಎಸ್‌ಆರ್‌ಆರ್ 2020 ದಿನಾಂಕ 25-09-2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-`ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 4 ರಷ್ಟು ಮತ್ತು ಗ್ರೂಪ್-`ಸಿ' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ |

| | |
|---|---|
| | ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ: 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ:18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ.<br>ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 272 ಸೇನೆನಿ 2013 ದಿನಾಂಕ:11-02-2021 ರನ್ವಯ ಎದ್ದು ಕಾಣುವ ಅಂಗವಿಕಲತೆ (Benchmark Disabilities) ಅಥವಾ ನಿರ್ದಿಷ್ಟಪಡಿಸಿದ ಅಂಗವಿಕಲತೆ (Specified Disabilities) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಂಗವಿಕಲತೆಯ ಸಂಬಂಧಿಸಿದ ಮೀಸಲಾತಿಯನ್ನು ಕೋರಿ ಅಂಗವಿಕಲತೆಯ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು ಹಾಗೂ ಇತರೆ ಎದ್ದು ಕಾಣುವ ಅಂಗವಿಕಲತೆಯ ಹೊಂದಿರುವ ಅಭ್ಯರ್ಥಿಗಳು ಪರೀಕ್ಷೆಯನ್ನು ಬರೆಯಲು ಲಿಪಿಕಾರರ ಸಹಾಯ ಬೇಕಿದ್ದಲ್ಲಿ ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಅನುಬಂಧ-1 ರಲ್ಲಿ ಪಡೆದ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು. ತನ್ನದೇ ಆದ ಲಿಪಿಕಾರರ ಸೇವೆಯನ್ನು ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಅನುಬಂಧ-1 ಮತ್ತು ಅನುಬಂಧ-2 ರಲ್ಲಿ ಪಡೆದ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಅಪ್ ಲೋಡ್ ಮಾಡತಕ್ಕದ್ದು. ಈ ಸಂಬಂಧ ಅರ್ಜಿ ಸಲ್ಲಿಸುವ ಸಮಯದಲ್ಲಿ ಲಿಪಿಕಾರರ ಅವಶ್ಯಕತೆ ಇರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು. ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಒಂದು ಗಂಟೆಯ ಪರೀಕ್ಷೆಗೆ ಹೆಚ್ಚುವರಿಯಾಗಿ 20 ನಿಮಿಷಗಳ ಕಾಲಾವಕಾಶವನ್ನು ನೀಡಲಾಗುವುದು. (ಅನುಬಂಧ-1 ಮತ್ತು 2 ರ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). |
